ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸುವ ಕುರಿತು

ಶ್ರೀ ಅರವಿಂದಕುಮಾರ್‌ಅರಳಿ(ವಿಧಾನಸಭೆಯಿಂದಚುನಾಯಿತರಾದವರು):-

54 (151) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಕಳೆದ ಎರಡು ಹಂಗಾಮಿನಿಂದ ಪ್ರಾರಂಭ ಮಾಡದೆ ಬಂದ್ ಮಾಡಲಾಗಿದ್ದು, ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಎರಡು ವರ್ಷದಿಂದ ಸಂಬಳ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರಿಗೆ ಪರಿಹಾರ ನೀಡುವ ಯೋಚನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಯಾವಾಗ ಪರಿಹಾರ ನೀಡಲಾಗುವುದು ;

(ಆ) ಈ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಪರ್ಯಾಯ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಹಮ್ಮಿಕೊಂಡಿರುವ ಯೋಜನೆಗಳಾವುವು;

(ಇ) ಸದರಿ ಕಾರ್ಖಾನೆಯನ್ನು ಪುನ:ಶ್ಚೇತನ ಮಾಡುವ ಯೋಜನೆ ಸರ್ಕಾರಕ್ಕಿದೆಯೇ; ಇದ್ದರೆ, ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದರೆ ಅದಕ್ಕೆ ಕಾರಣವೇನು ?